# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

| ಸಂಪುಟ – 01<br>Volume - 01 | ಸಂಚಿಕೆ – 267<br>Issue - 267 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269<br>Title- Code: KARKAN 28269 | ಚಿತ್ರದುರ್ಗ<br>Chitradurga | ದಿನಾಂಕ: 14-05-2024 ಮಂಗಳವಾರ<br>Date: 14-05-2024 Tuesday | ಪುಟ: 4<br>Page: 4 | ಬೆಲೆ : ರೂ.2-00<br>Price: Rs. 2-00 |
|---|---|---|---|---|---|---|



ಒಳಪುಟದ ಸುದ್ದಿಗಳು

ಚಳ್ಳಕೆರೆಯಲ್ಲಿ ಮಳೆ ಅಬ್ಬರ: ನೆಲಕಚ್ಚಿದ ತೋಟ 2

ಆಪರೇಶನ್ ಕಮಲ ಬಿಜೆಪಿಯ ಹಗಲುಗನಸು: ಸಿಎಂ 3

ಮನಸಿನೊಳಗೊಂದು ಪಯಣ 4



ಸುದ್ದಿ, ಜಾಹಿರಾತಿಗೆ 9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಚಿತ್ರದುರ್ಗ: ಡಿ.ಮರಿಕುಂಟೆಯಲ್ಲಿ 51.6 ಮಿ.ಮೀ ಮಳೆ

» ಚಿತ್ರದುರ್ಗ

ಭಾನುವಾರ ರಾತ್ರಿ ಸುರಿದ ಮಳೆ ವಿವರದನ್ವಯ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಡಿ.ಮರಿಕುಂಟೆಯಲ್ಲಿ 51.6 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅತ್ಯಧಿಕ ಪ್ರಮಾಣದ ಮಳೆಯಾಗಿದೆ.

ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 29.6 ಮಿ.ಮೀ, ಪರಶುರಾಂಪುರ 31.8 ಮಿ.ಮೀ, ನಾಯಕನಹಟ್ಟಿ 8.2 ಮಿ.ಮೀ, ತಳಕು 27.2 ಮಿ.ಮೀ ಮಳೆಯಾಗಿದೆ.ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 13.2, ಚಿಕ್ಕಜಾಜೂರು 12.6 ಮಿ.ಮೀ, ಹೆಚ್.ಡಿ.ಪುರದಲ್ಲಿ 11.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರಿನಲ್ಲಿ 23 ಮಿ.ಮೀ, ರಾಯಾಪುರ 15.6 ಮಿ.ಮೀ, ಬಿ.ಜಿ.ಕೆರೆ 37 ಮಿ.ಮೀ, ರಾಂಪುರ 6 ಮಿ.ಮೀ, ದೇವಸಮುದ್ರದಲ್ಲಿ 2 ಮಿ.ಮೀ ಮಳೆಯಾಗಿದೆ.ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 6.4 ಮಿ.ಮೀ, ಬಾಗೂರು 17.2 ಮಿ.ಮೀ, ಮಾಡದಕೆರೆ 17.2 ಮಿ.ಮೀ, ಮತ್ತೋಡು 14.2 ಮಿ.ಮೀ, ಶ್ರೀರಾಂಪುರದಲ್ಲಿ 35 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗ–1ರಲ್ಲಿ 14.6 ಮಿ.ಮೀ, ಚಿತ್ರದುರ್ಗ–2ರಲ್ಲಿ 21 ಮಿ.ಮೀ, ಹಿರೇಗುಂಟನೂರು 1.2 ಮಿ.ಮೀ, ಭರಮಸಾಗರ 3.4 ಮಿ.ಮೀ, ಸಿರಿಗೆರೆ 9 ಮಿ.ಮೀ, ಐನಹಳ್ಳಿಯಲ್ಲಿ 11.2 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 31.2 ಮಿ.ಮೀ, ಇಕ್ಕನೂರು 15 ಮಿ.ಮೀ, ಈಶ್ವರಗೆರೆ 20.2 ಮಿ.ಮೀ, ಬಬ್ಬೂರು 11 ಮಿ.ಮೀ, ಸೂಗೂರು 31.2 ಮಿ.ಮೀ ಮಳೆಯಾಗಿದೆ.10 ಮನೆಗಳು ಭಾಗಶಃ ಹಾನಿ: ಭಾನುವಾರ ರಾತ್ರಿ ಸುರಿದ ಮಳೆಗೆ ಜಿಲ್ಲೆಯಾದ್ಯಂತ 10 ಮನೆಗಳು ಭಾಗಶಃ ಹಾನಿಯಾಗಿದ್ದು, 2 ದೊಡ್ಡ ಜಾನುವಾರು, 3 ಸಣ್ಣ ಜಾನುವಾರು ಹಾಗೂ 6.11 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ 2 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಹೊಳಲ್ಕೆರೆ ತಾಲ್ಲೂಕಿನಲ್ಲಿ 8 ಮನೆ ಭಾಗಶಃ ಹಾನಿಯಾಗಿದ್ದು, 0.50 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ. ಹೊಸದುರ್ಗ ತಾಲ್ಲೂಕಿನಲ್ಲಿ 1 ಮನೆ ಭಾಗಶಃ ಹಾನಿಯಾಗಿದ್ದು, 2 ಹೆಕ್ಟೇರ್ ತೋಟಗಾರಿಕೆ ಬೆಳೆ ಹಾನಿಯಾಗಿದೆ.

ಹಿರಿಯೂರು ತಾಲ್ಲೂಕಿನಲ್ಲಿ 2 ದೊಡ್ಡ ಜಾನುವಾರು ಹಾಗೂ 1 ಮನೆ ಭಾಗಶಃ ಹಾನಿ, 1.61 ಹೆಕ್ಟೇರ್ ತೋಟಗಾರಿಕೆ ಬೆಳೆಹಾನಿಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನಲ್ಲಿ 2 ಸಣ್ಣ ಜಾನುವಾರು ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಅನಾಮದೇಯ ವ್ಯಕ್ತಿಯ ಶವ ಪತ್ತೆ

» ಚಿತ್ರದುರ್ಗ

ತಾಲ್ಲೂಕಿನ ತುರುವನೂರು ಪೊಲೀಸ್ ಠಾಣೆ ವ್ಯಾಪ್ತಿಯ ಚಿಕ್ಕಗೊಂಡನಹಳ್ಳಿ ಗ್ರಾಮದ ಎಸ್.ಆರ್. ಅಶೋಕ್ ಕುಮಾರ್ ಎಂಬುವವರ ಜಮೀನಿನ ಮುಂದೆ ಹಾದು ಹೋಗಿರುವ ಎನ್.ಹೆಚ್–50 ರಸ್ತೆಯಲ್ಲಿ ಅಪಘಾತದಿಂದ ಮೃತಪಟ್ಟ ಸುಮಾರು 45–50 ವರ್ಷದ ವ್ಯಕ್ತಿಯ ಶವ ದೊರೆತಿದೆ. ಈ ಕುರಿತು ಮೇ.12 ರಂದು ತುರುವನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತಪಟ್ಟ ವ್ಯಕ್ತಿಯ ವಿವರ ಪತ್ತೆಯಾಗದ ಕಾರಣ ಶವವನ್ನು ಜಿಲ್ಲಾ ಆಸ್ಪತ್ರೆಯ ಕೋಲ್ಡ್ ಸ್ಟೋರೇಜ್‌ನಲ್ಲಿ ಇರಿಸಲಾಗಿದೆ. ಅನಾಮದೇಯ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಪೊಲೀಸ್ ಅಧೀಕ್ಷಕರ ಕಚೇರಿಯ ದೂರವಾಣಿ ಸಂಖ್ಯೆ: 08194–222781, 9480803101, ಚಿತ್ರದುರ್ಗ ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರು ದೂರವಾಣಿ ಸಂಖ್ಯೆ: 08194–222430, ತುರುವನೂರು ಪೊಲೀಸ್ ಠಾಣೆಯ ಪಿಎಸ್‌ಐ ದೂರವಾಣಿ ಸಂಖ್ಯೆ: 9480803149 ಹಾಗೂ ಚಿತ್ರದುರ್ಗ ಪೊಲೀಸ್ ಕಂಟ್ರೋಲ್ ರೂಂ : 08194–224598 ಗೆ ಸಂಪರ್ಕಿಸಬಹುದು.



# 15 ರಂದು ಮದಕರಿ ನಾಯಕ ಪುಣ್ಯಸ್ಮರಣೆ



» ಚಿತ್ರದುರ್ಗ

ರಾಜವೀರ ಮದಕರಿ ನಾಯಕ ಪುಣ್ಯ ಸ್ಮರಣೆ ಕಾರ್ಯಕ್ರಮವನ್ನು ಮೇ 15 ರಂದು ಹಮ್ಮಿಕೊಳ್ಳಲಾಗಿದೆ ಎಂದು ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ನಾಯಕ ಸಮಾಜದ ಮುಖಂಡರ ಆಯೋಜಿಸಿದ್ದ ಮದಕರಿನಾಯಕ ಪುಣ್ಯಸ್ಮರಣೆ ಕಾರ್ಯಕ್ರಮ ಕುರಿತು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದರು.

ಮದಕರಿನಾಯಕ ಹೆಸರು ಎಲ್ಲೋ ಒಂದು ಕಡೆ ಮರೆಯಗಬಾರದು ಎಂಬ ದೃಷ್ಟಿಯಿಂದ ವರ್ಷಕ್ಕೆ ಮೂರು ಬಾರಿ ನೆನಪು ಮಾಡಿಕೊಳ್ಳುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಮದಕರಿನಾಯಕರ ಪಟ್ಟಾಭಿಷೇಕ, ಪುಣ್ಯ ಸ್ಮರಣೆ ಮತ್ತು ಮದಕರಿನಾಯಕ ಜಯಂತ್ಯೋತ್ಸವ ಕಾರ್ಯಕ್ರಮ ಮಾಡಲಾಗುತ್ತದೆ. ಅದರಂತೆ ಮೇ 15 ರಂದು ಪುಣ್ಯಸ್ಮರಣೆ ಮಾಡಲಾಗುತ್ತದೆ. ಅಂದು ಬೆಳಗ್ಗೆ 11ಕ್ಕೆ ಪ್ರತಿಮೆ ಮುಂಭಾಗದಲ್ಲಿ ಹೂವಿನ ಅಲಂಕಾರ, ಪುಷ್ಪಾರ್ಚನೆ, ಸಂಜೆ ಮೇಣದ ಬತ್ತಿ ಬೆಳಗುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ನಗರದಲ್ಲಿ ನಿರ್ಮಾಣವಾಗುತ್ತಿರುವ ವಾಲ್ಮೀಕ ಸಮುದಾಯ ಭವನ ಇನ್ನೂ ಪೂರ್ಣವಾಗಿಲ್ಲ, ಅದು ಅವೈಜ್ಞಾನಿಕವಾಗಿ ನಿರ್ಮಾಣ ಮಾಡಲಾಗಿದೆ ಇದಕ್ಕೆ ಅಧಿಕಾರಿಗಳು ಹಾಗು ರಾಜಕಾರಣಿಗಳು ಕಾರಣವಾಗಿದ್ದಾರೆ. ಇದರ ಬಗ್ಗೆ ತಿಳಿಸಲಾಗಿದೆ ಈ ಹಿನ್ನಲೆಯಲ್ಲಿ ವಾಲ್ಮಿಕಿ ಭವನದ ಉದ್ಘಾಟನೆ ತಡವಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ಈ ಕಾರ್ಯಕ್ರಮದಲ್ಲಿ ನೀತಿ ಸಂಹಿತೆ ಇರುವುದಿಂದ ಯಾವ ರಾಜಕಾರಣಿಗಳು ಸಹ ಆಗಮಿಸುತ್ತಿಲ್ಲ. ಸಭಾ ಕಾರ್ಯಕ್ರಮ ಇರುವುದಿಲ್ಲ. ಹೆಚ್ಚಿನ ಸಂಖ್ಯೆಯಲ್ಲಿ ನಾಯಕ ಸಮಾಜ ಸೇರಿ ಎಲ್ಲಾ ಸಮಾಜದ ಬಂಧುಗಳು ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ ಮಾತನಾಡಿ, ನೀತಿ ಸಂಹಿತೆ ಜಾರಿ ಇರುವುದಿಂದ ಸರಳವಾಗಿ ಮದಕರಿನಾಯಕ ಪುಣ್ಯ ಸ್ಮರಣೆ ಮಾಡಲಾಗುತ್ತಿದ್ದು ಮುಂದಿನ ಬಾರಿ ಅದ್ದೂರಿಯಾಗಿ ಮಾಡಲಾಗುತ್ತದೆ. ಪುಣ್ಯ ಸ್ಮರಣೆಗೆ ಎಲ್ಲಾ ಸಮಾಜದವರು ಭಾಗವಹಿಸಿ ಎಂದರು.

ಮುಖಂಡರಾದ ಜೆ.ಎನ್.ಕೋಟೆ ಗುರುಸಿದ್ದಪ್ಪ, ಗೋಪಾಲಸ್ವಾಮಿನಾಯಕ್, ದೀಪು, ಅಂಜಿನಪ್ಪ, ಕಾಟೀಹಳ್ಳಿ ಕರಿಯಪ್ಪ, ತಿಪ್ಪೇಸ್ವಾಮಿ ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ಚಳ್ಳಕೆರೆ ತಾಲೂಕಿನಲ್ಲಿ ವಿವಿಧೆಡೆ ಅಗ್ನಿ ಅವಘಡ

## ಶ್ರೀಕಂಠೇಶ್ವರ ಟಿವಿ ಶೋರೂಂ ಶಾರ್ಟ್ ಸರ್ಕ್ಯೂಟ್ ಬೆಂಕಿ: 40 ಲಕ್ಷಕ್ಕೂ ಹೆಚ್ಚು ನಷ್ಟ

» ಚಳ್ಳಕೆರೆ

ನಗರದ ಮಧ್ಯಭಾಗದಲ್ಲಿರುವ ಶ್ರೀಬನ 'ಶಂಕರಿದೇವಸ್ಥಾನಕ್ಕೆಹೊಂದಿಕೊಂಡಿರುವ ಶ್ರೀಕಂಠೇಶ್ವರಟಿ.ವಿ.ಶೋರೂಂಗೆಎಲೆಕ್ಟ್ರಿಕ್ ಶಾರ್ಟ್‌ಸರ್ಕ್ಯೂಟ್‌ನಿಂದ ಸೋಮವಾರ ಬೆಳಗ್ಗೆ ಬೆಂಕಿ ಕಾಣಿಸಿಕೊಂಡು ಅಂಗಡಿಯಲಿದ್ದ ಎಲ್ಲಾ ವಸ್ತುಗಳು ಬೆಂಕಿಗೆ ಆಹುತಿಯಾಗಿವೆ.

ಅಗ್ನಿಶಾಮಕ ಠಾಣೆಯ ಎರಡೂ ಅಗ್ನಿಶಾಮಕ ವಾಹನಗಳು ಅಂಗಡಿ ಒಳ ಮತ್ತು ಮೇಲ್ಭಾಗವನ್ನು ನಿರಂತರವಾಗಿ ಸುಮಾರು ಒಂದೂವರೆ ಗಂಟೆಗಳ ಕಾಲ ಬೆಂಕಿಯನ್ನು ಸಂಪೂರ್ಣವಾಗಿ ನಿಯಂತ್ರಿಸಿ ನಂದಿಸುವಲ್ಲಿ ಯಶಸ್ವಿಯಾದರು. ಅಗ್ನಿಶಾಮಕ ಠಾಣಾಧಿಕಾರಿ ಬಿ.ಜಯಣ್ಣ, ಬೆಂಕಿಯ ಜ್ವಾಲೆ ಇಡೀ ಅಂಗಡಿಯನ್ನು ವ್ಯಾಪಿಸಿದ್ದು, ಒಂದೇ ಹಂತದಲ್ಲಿ ಬೆಂಕಿ ಹತೋಟಿಗೆ ತರಲು ಕಷ್ಟವಾಗಿತ್ತು.



ಆದ್ದರಿಂದ ಎರಡೂ ಅಗ್ನಿಶಾಮಕ ಪಡೆ ಹಾಗೂ ಹೆಚ್ಚಿನ ಸಿಬ್ಬಂದಿ ನಿಯೋಜಿಸಿ ಅಂಗಡಿಯ ಒಳಭಾಗದಲ್ಲಿ ನಿರಂತರ ನೀರು ಹರಿಸಿದ ಪರಿಣಾಮವಾಗಿ ಬೆಂಕಿ ನಿಯಂತ್ರಿಸಲು ಸಾಧ್ಯವಾಯಿತು. ಅಂಗಡಿ ಮಾಲೀಕ ಜಯಪ್ರಕಾಶ್ ಮಾತನಾಡಿ, ಎಂದಿನಂತೆ ಭಾನುವಾರ ಸಂಜೆ ಅಂಗಡಿ ಬೀಗ ಹಾಕಿ ಮನೆಗೆ ಹೋಗಿದ್ದು, ಬೆಳಗ್ಗೆ ಅಕ್ಕಪಕ್ಕದವರು ದೂರವಾಣಿ ಮೂಲಕ ಅಂಗಡಿ ಒಳಭಾಗದಲ್ಲಿ ಹೊಗೆಯಾಡುತ್ತಿರುವ ಬಗ್ಗೆ ಮಾಹಿತಿ ನೀಡಿದರು. ಕೂಡಲೇ ನಾನು ಆಗಮಿಸಿ ಅಗ್ನಿಶಾಮಕ ಪಡೆ ಪೊಲೀಸರಿಗೆ ಮಾಹಿತಿ ನೀಡಿದೆ. ಅಂಗಡಿಯಲ್ಲಿದ್ದ ಎಲ್ಲಾ ಎಲೆಕ್ಟ್ರಾನಿಕ್ ವಸ್ತುಗಳು ಹಾಗೂ ಇತರೆ ಉಪಕರಣಗಳು ಬೆಂಕಿಗೆ ಆಹುತಿಯಾಗಿ ಸುಮಾರು 40ಲಕ್ಷಕ್ಕೂ ಹೆಚ್ಚು ನಷ್ಟ ಸಂಭವಿಸಿದೆ ಎಂದಿದ್ದಾರೆ.

## ತಿಪ್ಪಾರೆಡ್ಡಿಹಳ್ಳಿ: ಸಂಪೂರ್ಣ ಸುಟ್ಟುಹೋದ ಮನೆ: 2 ಲಕ್ಷ ನಷ್ಟ



» ಚಳ್ಳಕೆರೆ

ತಾಲ್ಲೂಕಿನ ತಿಪ್ಪಾರೆಡ್ಡಿಹಳ್ಳಿ ಗ್ರಾಮದಲ್ಲಿ ಸೋಮವಾರ ಮಧ್ಯಾಹ್ನ ಸಂಭವಿಸಿದ ವಿದ್ಯುತ್ ಶಾರ್ಟ್‌ಸರ್ಕ್ಯೂಟ್‌ನಿಂದ ಲಕ್ಷ್ಮಿದೇವಿ ಎಂಬುವವರಿಗೆ ಸೇರಿದ ಮನೆ ಸಂಪೂರ್ಣ ಸುಟ್ಟುಹೋಗಿ ಸುಮಾರು ಎರಡು ಲಕ್ಷ ಹೆಚ್ಚು ನಷ್ಟ ಸಂಭವಿಸಿದೆ ಎನ್ನಲಾಗಿದೆ.

ದಿಢೀರನೆ ಬೆಂಕಿ ಕಾಣಿಸಿಕೊಂಡ ಪರಿಣಾಮವಾಗಿಮನೆಯಲ್ಲಿದ್ದಟಿ.ವಿ.ಫ್ರಿಡ್ಜ್, ಆಹಾರ ಪದಾರ್ಥ, ಬಟ್ಟೆ, ದಾಖಲಾತಿಗಳು ಎಲ್ಲವೂ ಕೆಲವೇ ನಿಮಿಷದಲ್ಲಿ ಬೆಂಕಿಗೆ ಆಹುತಿಯಾಗಿವೆ. ನೆರೆಹೊರೆಯವರು ದಾವಿಸಿ ಬೆಂಕಿ ನಂದಿಸುವಲ್ಲಿ ಸಾಕಷ್ಟು ಪರಿಶ್ರಮವಹಿಸಿದರು. ಚಳ್ಳಕೆರೆ ಅಗ್ನಿಶಾಮಕ ವಾಹನ ಕೂಡಲೇ ಗ್ರಾಮಕ್ಕೆ ತೆರಳಿ ಬೆಂಕಿಯನ್ನು ಹತೋಟಿಗೆ ತಂದಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸ್ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿದ್ದಾರೆ.

## ಫಾಸ್ಟ್ ನ್ಯೂಸ್

### ತಿಪ್ಪಮ್ಮ ನಿಧನ



» **ಚಿತ್ರದುರ್ಗ**

ನಗರದ ಜಯಲಕ್ಷ್ಮಿ ಲೇ ಔಟ್ ನ ನಿವಾಸಿ ತಿಪ್ಪಮ್ಮ ಕಾಶಿನಾಥ್ ಶೆಟ್ಟಿ (95) ಭಾನುವಾರ ನಿಧನ ಹೊಂದಿದರು. ಮೃತರ ಅಂತ್ಯಕ್ರಿಯೆ ಹೊಳಲ್ಕೆರೆ ತಾಲೂಕಿನ ಚಿಕ್ಕಜಾಜೂರು ಗ್ರಾಮದಲ್ಲಿ ಸೋಮವಾರ ಸಂಜೆ ನೆರವೇರಿತೆಂದು ಕುಟುಂಬ ಮೂಲಗಳು ತಿಳಿಸಿವೆ.

### ವ್ಯಕ್ತಿ ಕಾಣೆ

» **ಚಿತ್ರದುರ್ಗ**

ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಮಲ್ಲಸಿಂಗನಹಳ್ಳಿ ಗ್ರಾಮದ ಕುಂಬಾರ ಸಿದ್ದಪ್ಪ ತಂದೆ ಲೇಟ್ ಕರಿಸಿದ್ದಪ್ಪ (ಸುಮಾರು 64 ವರ್ಷ) ವ್ಯಕ್ತಿಯು ಕಾಣೆಯಾಗಿರುವ ಪ್ರಕರಣ ಮೇ 07 ರಂದು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಕುಂಬಾರ ಸಿದ್ದಪ್ಪ, ಸುಮಾರು 64 ವರ್ಷ, ದುಂಡು ಮುಖ, ಎಣ್ಣೆಗೆಂಪು ಮೈಬಣ್ಣ, ಧೃಡವಾದ ಮೈಕಟ್ಟು, ತಲೆಯಲ್ಲಿ ಕಪ್ಪು ಬಿಳಿ ಕೂದಲು, ಕನ್ನಡ ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗವಾಗ ಬಿಳಿ ಬಣ್ಣದ ಷರ್ಟ್ ಹಾಗೂ ಬಿಳಿ ಬಣ್ಣದ ಪಂಚೆ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಬಗ್ಗೆ ಸುಳಿವು ದೊರೆತಲ್ಲಿ ಚಿತ್ರಹಳ್ಳಿ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ: 9480803165 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಎಸ್‌ಆರ್‌ಎಸ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100ರ ಸಾಧನೆ

» **ಚಳ್ಳಕೆರೆ**

ಇತ್ತೀಚೆಗೆ ಪ್ರಕಟಗೊಂಡ ಪ್ರಸ್ತುತ 2024ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100ರ ಫಲಿತಾಂಶ ದಾಖಲೆ ಸಾಧನೆಯನ್ನು ಮಾಡಿದ





ವಿದ್ಯಾರ್ಥಿಗಳನ್ನು ಆಡಳಿತ ಮಂಡಳಿ ವತಿಯಿಂದ ಶಾಲೆಯಲ್ಲಿ ನಡೆದ ಸರಳ ಕಾರ್ಯಕ್ರಮದಲ್ಲಿ ಅಭಿನಂದಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ಮಾತನಾಡಿ, ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶ ನಿರೀಕ್ಷೆಯಂತೆ ಜಿಲ್ಲಾ ಮಟ್ಟದಲ್ಲಿ ಕಡಿಮೆಯಾಗಿದ್ದರೂ ನಮ್ಮ ವಿದ್ಯಾಸಂಸ್ಥೆಯಲ್ಲಿ ಶೇ.100ರ ಪ್ರಗತಿ ಸಾಧಿಸಿರುವುದು ಸಂತಸ ತಂದಿದೆ. ಶಾಲೆಯಲ್ಲಿ ಬೋಧಕ ವರ್ಗ ವಿದ್ಯಾರ್ಥಿಗಳಿಗೆ ಅವಶ್ಯವಿರ ಎಲ್ಲಾ ವಿಚಾರಗಳನ್ನು ತಿಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ವಿದ್ಯಾರ್ಥಿಗಳ ಪರಿಶ್ರಮ, ಪೋಷಕರ ಸಹಕಾರದಿಂದ ಈ ಪ್ರಗತಿ ಸಾಧಿಸಿದ್ದು ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು. ಆಡಳಿತಾಧಿಕಾರಿ ಪಿ.ಎನ್. ಕೃಷ್ಣಪ್ರಸಾದ್ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಮ್ಮ ಸಂಸ್ಥೆಯ ವಿದ್ಯಾರ್ಥಿಗಳಾದ ಸಿ.ಎಸ್.ನೇಹಾ, ಆರ್.ಬಿಂದು, ಟಿ.ಪ್ರಜ್ಞಾ ಕನ್ನಡದಲ್ಲಿ 100ಕ್ಕೆ100, ಸಂಸ್ಕೃತ ಭಾಷೆಯಲ್ಲಿ ಎಸ್.ಸೋಹನ್ 100ಕ್ಕೆ100 ಅಂಕ ಪಡೆದಿದ್ದಾರೆ. ಸಿ.ಎಸ್.ನೇಹಾ–95.04 ಆರ್.ಬಿಂದು–95.02 ಅಂಕಗಳಿಸಿ ಅಗ್ರಸ್ಥಾನದಲ್ಲಿದ್ದಾರೆ. ಉಳಿದಂತೆ ಪಿ.ವೈಷ್ಣವಿ–92.06, ಪ್ರಜ್ಞಾಪ್ರವಾಲಿಕ–90.04, ಪಿ.ಗುರುಸುಭ್ರಮಣ್ಯ–90.02, ಟಿ.ಪ್ರಜ್ಞಾ–89.02, ಬಿ.ಎಂ.ಬಿಂದುಶ್ರೀ–86.04 ಅಂಕ ಪಡೆದು ಮೊದಲ ಸ್ಥಾನದಲ್ಲಿದ್ದಾರೆ. ವಿದ್ಯಾರ್ಥಿಗಳ ಸಾಧನೆಯ ಬಗ್ಗೆ ಕಾರ್ಯದರ್ಶಿ ಸುಜಾತಲಿಂಗಾರೆಡ್ಡಿ, ಪ್ರಾಂಶುಪಾಲ ಬಿ.ಎಸ್.ವಿಜಯ್ ಸಂತಸ ವ್ಯಕ್ತಪಡಿಸಿದ್ದಾರೆ.

### ಹೊಸದುರ್ಗ ಹಾಡು ಹಗಲೆ ಕರಡಿ ಪ್ರತ್ಯಕ್ಷ



» **ಹೊಸದುರ್ಗ**

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಿಂಭಾಗದಲ್ಲಿ ಹಾಡು ಹಗಲಲ್ಲೆ ಕರಡಿ ಪ್ರತ್ಯಕ್ಷವಾಗಿದ್ದು, ಆತಂಕದ ವಾತಾವರಣ ನಿರ್ಮಾಣವಾಗಿದೆ.ಶನಿವಾರ ಸಂಜೆ ಬಿ.ಸಿ.ಎಂ. ವಸತಿ ನಿಲಯ, ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯದ ವಿದ್ಯಾರ್ಥಿಗಳು ವಾಯುವಿಹಾರ ಮಾಡುತ್ತಿದ್ದ ಸಂದರ್ಭದಲ್ಲಿ, ಕರಡಿ ಈ ಮಾರ್ಗವಾಗಿ ಚಲಿಸುವುದನ್ನು ಕಂಡಿದ್ದಾರೆ ನಂತರ ಮರು ಭಾನುವಾರ ಮದ್ಯಾಹ್ನ ಇದೇ ಸ್ಥಳದ ಹಾಜು ಬಾಜಿನಲ್ಲಿ ಕರಡು ಓಡಾಡಿದೆ. ನಾಯಿ ಬೀಗಳುವುದರ ಜೊತೆಗೆ ಕರಡಿಯನ್ನ ಬೆನ್ನಟ್ಟಿದೆ ಈ ದೃಶ್ಯವನ್ನ ನೋದ ತಕ್ಷಣ ಅಲ್ಲಿನ ಜನರು ಕೂಡಲೇ ಕೂಗಾಡಿ ಕರಡಿಯನ್ನು ಓಡಿಸಲಾಗಿದೆ.

ಇದೇ ಮಾರ್ಗದಲ್ಲಿ ವಸತಿ ನಿಲಯಗಳಿದ್ದು, ವಿದ್ಯಾರ್ಥಿಗಳು ಓಡಾಡಲು ಆತಂಕ ಪಡುವಂತಾಗಿದೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಯವರು ಕರಡಿ ಸೆರೆಗೆ ಮುಂದಾಗಬೇಕು.

# ಚಳ್ಳಕೆರೆಯಲ್ಲಿ ಮಳೆ ಅಬ್ಬರ: ನೆಲಕಚ್ಚಿದ ತೋಟ

» **ಚಳ್ಳಕೆರೆ**

ಕಳೆದ ಸುಮಾರು ಎರಡು ತಿಂಗಳಿನಿಂದ ಬೇಸಿಗೆಯ ಸುಡುವ ರಣಬಿಸಿಲಿಗೆ ಜನರು ಹೈರಾಣಾಗಿದ್ದರು. ಕಳೆದ ಎರಡ್ಮೂರು ದಿನಗಳಿಂದ ಸುರಿಯುತ್ತಿರುವ ಮಳೆ ಜೊತೆಗೆ ಅವಾಂತರಗಳನ್ನು ಸೃಷ್ಠಿಸಿದೆ. ತಾಲ್ಲೂಕಿನಾದ್ಯಂತ ನಿರೀಕ್ಷೆಗೂ ಮೀರಿ ಉತ್ತಮ ಮಳೆ ಬಂದಿದೆ. ಒಂದೇ ದಿನ 147.04 ಎಂ.ಎಂ. ಮಳೆಯಾಗುವ ಮೂಲಕ ತಾಲ್ಲೂಕಿನಾದ್ಯಂತ ಭೂಮಿ ತಂಪಾಗಿದೆ.

ಕಳೆದ ವಾರವಷ್ಟೇ ಎರಡ್ಮೂರು ಬಾರಿ ಮಳೆಯಾಗಿ ತಾಲ್ಲೂಕಿನ ಗಡಿ ಗ್ರಾಮಗಳ ತೋಟದ ಬೆಳೆಗಳು ನೆಲಕಚ್ಚಿ ಲಕ್ಷಾಂತರ ರೂಪಾಯಿ ನಷ್ಟವಾಗಿತ್ತು. ಅದೇ ರೀತಿ ಸೋಮವಾರ ಬೆಳಗಿನ ಜಾವ ಸುರಿದ ಮಳೆಗೆ ತಾಲ್ಲೂಕಿನ ಘಟಪರ್ತಿ ಮತ್ತು ಪುರ್ಲಹಳ್ಳಿ ಗ್ರಾಮಗಳ ತೋಟಗಳ ಬೆಳೆಗಳಿಗೆ ನೀರು ನುಗ್ಗಿ ಹಾನಿಯಾಗಿದೆ.ಘಟಪರ್ತಿ ಗ್ರಾಮದ ತಿಮ್ಮಣ್ಣ ಎಂಬುವವರ ಸುಮಾರು ಒಂದು ಎಕರೆ ಪ್ರದೇಶದ ಮೆಕ್ಕೆಜೋಳ





ಬೆಳೆ ನೀರಿನಿಂದ ಆವೃತ್ತವಾಗಿ ಇಡೀ ಬೆಳೆ ಸಂಪೂರ್ಣ ನಾಶವಾಗಿ ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಇದೇ ಗ್ರಾಮದ ದೊಡ್ಡ ತಿಮ್ಮಣ್ಣ ಎಂಬುವವರ ಮೆಕ್ಕೆಜೋಳ ಬೆಳೆಯೂ ನೀರಿಗೆ ಆಹುತಿಯಾಗಿದೆ. ಗ್ರಾಮ ತಾಯಮ್ಮ ಎಂಬುವವರ ಮೂರು ಎಕರೆ ಜಮೀನಿ ಮೆಕ್ಕೆಜೋಳ ಗಾಳಿ ಮಳೆಗೆ ಸಂಪೂರ್ಣ ನಾಶವಾಗಿ ಲಕ್ಷಾಂತರ ರೂಪಾಯಿ ನಷ್ಟವಾಗಿದೆ. ಪುರ್ಲೆಹಳ್ಳಿ ಗ್ರಾಮದ ಮಂಜುನಾಥ ಎಂಬುವವರ ಸುಮಾರು 1.30 ಎಕರೆ ಪ್ರದೇಶದ ಬಾಳೆ ತೋಟ ಕಳಚಿಬಿದ್ದು ತುಂಬಿ 40 ಸಾವಿರಕ್ಕೂ ಹೆಚ್ಚು ನಷ್ಟ ಸಂಭವಿಸಿದೆ.ನಿರಂತರ ಮಳೆಯಿಂದ ಜಮೀನಿನಬೆಳೆಗಳುಹಾಳಾಗುತ್ತಿದ್ದು,ರೈತರು ಮಳೆಯಿಂದ ಆದ ನಷ್ಟವನ್ನು ಸರ್ಕಾರ ಬರಿಸುತ್ತದೆ ಎಂಬ ಭಾವನೆಯಲ್ಲಿದ್ದು, ನಷ್ಟವನ್ನು ತುಂಬಿಕೊಡುವಂತೆ ಈಗಾಗಲೇ ಗ್ರಾಮ ಲೆಕ್ಕಾಧಿಕಾರಿಗಳ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿದೆ. ಸಂಬಂಧಪಟ್ಟ ಗ್ರಾಮ ಲೆಕ್ಕಾಧಿಕಾರಿಗಳು ಗ್ರಾಮಕ್ಕೆ ಭೇಟಿ ನೀಡಿ ನಷ್ಟ ಅಂದಾಜಿನ ಬಗ್ಗೆ ವರದಿ ನೀಡಿರುತ್ತಾರೆ.ಸೋಮವಾರ ಬೆಳಗಿನ ಜಾವ ಬಿದ್ದ ಮಳೆಯ ಪ್ರಮಾಣ ದೇವರಮರಿಕುಂಟೆ–51.06, ಪರಶುರಾಮಪುರ–31.08, ಚಳ್ಳಕೆರೆ–29.06, ತಳಕು–27.02, ನಾಯಕನಹಟ್ಟಿ–08.02 ಒಟ್ಟು 147.04 ಎಂ.ಎಂ ಮಳೆಯಾಗಿದೆ.

# ಹೊಸದುರ್ಗದಲ್ಲಿ ಹದ ಮಳೆ, ರೈತರ ಸಂತಸ

» **ಹೊಸದುರ್ಗ**

ಕಳೆದ ಒಂದು ವರ್ಷದಿಂದ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗಿದೆ ಇದ್ದರಿಂದ, ರೈತರು ಬರಗಾಲ ಎದುರಿಸುತ್ತಿದ್ದರು. ತಾಲ್ಲೂಕಿನಾದ್ಯಂತ ಒಂದೆರಡು ದಿನಗಳಿಂದ ಹದ ಮಳೆಯಾಗಿದ್ದು, ರೈತರ ಮೊಗದಲ್ಲಿ ಸಂತಸ ತಂದಿದೆ.

ತಾಲ್ಲೂಕಿನ ವಿವಿಧೆಡೆ ಕಳೆದ ಎರಡು ದಿನಗಳಿಂದ ಹದ ಮಳೆಯಾಗಿದ್ದು, ರೈತರಿಗೆ ತುಸು ನೆಮ್ಮದಿ ಬಂದಂತಾಗಿದೆ. ಭೂಮಿ ಸಿದ್ಧತೆಗೆ ಅನುಕೂಲವಾಗಿದೆ. ಈ ವಾರದಲ್ಲಿ ಇನ್ನೊಂದು ಮಳೆಯಾಗುವ ನಿರೀಕ್ಷೆಯಿದ್ದು, ಬಿತ್ತನೆ ಕಾರ್ಯ ಆರಂಭವಾಗಲಿದೆ. ಈ ಬಾರಿ ಉತ್ತಮ ಮಳೆಯಾಗುವುದಾಗಿ ಹವಮಾನ ಇಲಾಖೆ ವರದಿ ನೀಡಿದ್ದು, ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬಹುದು ಎನ್ನುತ್ತಾರೆ ಸಹಾಯಕ ಕೃಷಿ ನಿರ್ದೇಶಕ ಸಿ ಎಸ್ ಈಶ.

**ಮಳೆಹಾನಿ:** ಶುಕ್ರವಾರ ಸುರಿದ ಮಳೆಯಿಂದಾಗಿ ಹನುಮನಹಳ್ಳಿ, ಸಣ್ಣಕಿಟ್ಟದಹಳ್ಳಿ, ಕೆಂಕೆರೆ, ಲಕ್ಕಿಹಳ್ಳಿ, ನಾಗನಯ್ಯನಕಟ್ಟೆಯಲ್ಲಿ ಬಾಳೆ ಗಿಡಗಳು ನೆಲಕ್ಕುರುಳಿದ್ದು, ರೈತರಿಗೆ ಸಂಕಷ್ಟ ತಂದಿವೆ.



ಇನ್ನೂ ಭಾನುವಾರ ರಾತ್ರಿ ಸುರಿದ ಗಾಳಿ ಮಳೆಯಿಂದಾಗಿ ಮುತ್ತಾಗೊಂದಿ ಗ್ರಾಮದ ರೈತ ಭೈರಪ್ಪ ಅವರಿಗೆ ಸೇರಿದ 150 ಬಾಳೆ ಗಿಡಗಳು ನೆಲಕ್ಕುರುಳಿವೆ.

**ಮಳೆ ವಿವರ:** ತಾಲ್ಲೂಕಿನಾದ್ಯಂತ ಭಾನುವಾರ ಸುರಿದ ಮಳೆ ವಿವರ ಇಂತಿದೆ. ಹೊಸದುರ್ಗ 6.4 ಮಿ.ಮೀ, ಬಾಗೂರು 10.2, ಮಾಡದಕೆರೆ 17.2, ಮತ್ತೋಡು 14.2 ಹಾಗೂ ಶ್ರೀರಾಂಪುರ 35 ಮಿ.ಮೀ ಮಳೆಯಾಗಿದೆ ಎಂದು ತಹಶೀಲ್ದಾರ್ ತಿರುಪತಿ ಪಾಟೀಲ್ ತಿಳಿಸಿದ್ದಾರೆ.

# ಮಳೆ ಹಾನಿ ಪ್ರದೇಶಗಳಿಗೆ ಶಾಸಕ ವೀರೇಂದ್ರ ಭೇಟಿ



» **ಚಿತ್ರದುರ್ಗ**

ಕಳೆದ ಎರೆಡು ದಿನಗಳಿಂದ ಸುರಿದ ಮಳೆಯಿಂದಾಗಿ ಹಾನಿಗೊಳಗಾದ ಪ್ರದೇಶಗಳಿಗೆ ಹಾಗೂ ಗ್ರಾಮಗಳಿಗೆ ಶಾಸಕ ಕೆ.ಸಿ.ವಿರೇಂದ್ರ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ, ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಂಡರು.

ಕ್ಷೇತ್ರದ ಮಲ್ಲಾಪುರ ಗ್ರಾಮದ ಡಾ.ಅಂಬೇಡ್ಕರ್ ಕಾಲೋನಿಗೆ ಭೇಟಿ ಮಾಡಿ, ಮಳೆಯಿಂದ ಹಾನಿಗೊಳಗಾದ ಮನೆಗಳನ್ನು ಹಾಗೂ ತಂತ್ರಸ್ಥರನ್ನು ಭೇಟಿ ಮಾಡಿ ಧೈರ್ಯ ತುಂಬಿ, ಕೂಡಲೇ ಪರಿಹಾರ ಹಣವನ್ನು ನೊಂದವರ ಖಾತೆಗಳಿಗೆ ಜಮಾ ಆಗುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಲ್ಲಾಪುರ ಡಾ.ಅಂಬೇಡ್ಕರ್ ಕಾಲೋನಿಯಲ್ಲಿ ಮೂರು ಮನೆಗಳು ಪೂರ್ಣ ಹಾಳಾಗಿದ್ದು, 1.20 ಲಕ್ಷ ರೂ. ಪರಿಹಾರ ಹಾಗೂ ಭಾಗಶಃ ಹಾನಿಗೊಳಗಾದ ಮನೆಗಳ ಫಲಾನುಭವಿಗಳಿಗೆ 11.400 ರೂ. ಗಳನ್ನು ಪರಿಹಾರದ ಮೊತ್ತವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಾಮಾ ಮಾಡಲಾಯಿತು. ಈ ಸಂದರ್ಭದಲ್ಲಿ ತಹಸೀಲ್ದಾರ್ ನಾಗವೇಣಿ, ಕಂದಾಯ ನಿರೀಕ್ಷಕ ಪ್ರಾಣೇಶ್, ಗ್ರಾಮಲೆಕ್ಕಾಧಿಕಾರಿ ಯಶೋಧಮ್ಮ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

# ರೈತ ಮೋಹನ್‌ಕುಮಾರ್ ಮನೆಗೆ ತಹಶೀಲ್ದಾರ್ ಭೇಟಿ

» **ಚಳ್ಳಕೆರೆ**

ತಾಲ್ಲೂಕಿನ ಬಾಲೇನಹಳ್ಳಿ ಗ್ರಾಮದಲ್ಲಿ ಮೋಹನ್ ಕುಮಾರ್ (43) ಎಂಬ ರೈತ ತನ್ನ ಜಮೀನಿನಲ್ಲಿದ್ದ ಬೆಳೆಯನ್ನು ಸಂರಕ್ಷಣೆ ಮಾಡಿಕೊಳ್ಳಲು ರಾಮಜೋಗಿಹಳ್ಳಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ 90 ಸಾವಿರ ಸಾಲ ಪಡೆದಿದ್ದ. ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಮಳೆ ವೈಪಲ್ಯದಿಂದ ಬೆಳೆ ನೆಲಕಚ್ಚಿತ್ತು.

ರೈತ ಮೋಹನ್‌ಕುಮಾರ್ ಸಾಲದ ಸುಳಿಗೆ ಸಿಲುಕಿದ್ದ. ಪ್ರತಿನಿತ್ಯ ತಾನು ಮಾಡಿದ ಬ್ಯಾಂಕ್ ಸಾಲ ತೀರಿಸುವ ನಿಟ್ಟಿನಲ್ಲಿ ಪದೇ, ಪದೇ ಕುಟುಂಬದೊಂದಿಗೆ ನಿರೂತ್ಸಾಹದಿಂದ ಮಾತನಾಡುತ್ತಿದ್ದ ಈತ ಮೇ. 12ರ ಬೆಳಗ್ಗೆ ತನ್ನ ವಾಸದ ಮನೆಯಲ್ಲಿ ನೇಣುಹಾಕಿಕೊಂಡು ಮೃತಪಟ್ಟಿದ್ದ.

ಜಮೀನಿನಲ್ಲಿ ತೊಗರಿ ಮತ್ತು ಕಡಲೆ ಬೆಳೆ ಬೆಳೆ ಸಂಪೂರ್ಣ ನೆಲಕಚ್ಚಿತ್ತು. ಸುದ್ದಿ ತಿಳಿದ ತಹಶೀಲ್ದಾರ್ ರೇಹಾನ್‌ಪಾಷ ಗ್ರಾಮದ ಅವರ ಮನೆಗೆ ತೆರಳಿ ಕುಟುಂಬರೊಡನೆ ಮೋಹನ್‌ಕುಮಾರ್ ಸಾಲ ಹಾಗೂ ವಾಸ್ತವ ಸ್ಥಿತಿಯ ಬಗ್ಗೆ ಮಾಹಿತಿ ಪಡೆದರಲ್ಲದೆ, ಕುಟುಂಬಕ್ಕೆ ಸಾಂತ್ವನ ತಿಳಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ರೈತರು ಬೆಳೆ ಬೆಳೆಯಲು ಸಾಲ ಮಾಡುವುದು ತಪ್ಪಲ್ಲ, ಇಂದಿಗೂ ಸಹ



ರಾಜ್ಯದಲ್ಲೆಡೆ ರೈತರು ಬೆಳೆಬೆಳೆಯಲು ಸಾಲ ಮಾಡಿರುತ್ತಾರೆ. ಸಾಲ ತಿವ್ರಳಿಯ ಬಗ್ಗೆ ಸಾಲ ಪಡೆದ ಬ್ಯಾಂಕ್ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಬೇಕು. ಬ್ಯಾಂಕ್ ಅಧಿಕಾರಿಗಳು ನಿರ್ಲಕ್ಷ್ಯೆ ಮಾಡಿದರೆ ಕೂಡಲೇ ತಾಲ್ಲೂಕು ಆಡಳಿತದ ಗಮನಕ್ಕೆ ತಂದರೆ ರೈತರ ಸಂಕಷ್ಟಕ್ಕೆ ಸರ್ಕಾರ ನೆರವಾಗಲಿದೆ. ಜೀವವನ್ನು ಕಳೆದುಕೊಂಡು ಇಡೀ ಸಂಸಾರವೇ ಬೀದಿಪಾಲಾಗುವ ಸ್ಥಿತಿಯನ್ನು ಯಾವ ರೈತರು ನಿರ್ಮಾಣಮಾಡಿಕೊಳ್ಳಬಾರದು ಎಂದಿದ್ದಾರೆ.

# ಸರ್ವ ಸದಸ್ಯರ ವಾರ್ಷಿಕ ಮಹಾಸಭೆ, ಪ್ರತಿಭಾ ಪುರಸ್ಕಾರ ಸಮಾರಂಭ

**ಚಿತ್ರದುರ್ಗ:** ವಿದ್ಯಾನಗರ ಕ್ಷೇಮಾಭಿವೃದ್ಧಿ ಸಂಘ (ರಿ.) ಇವರ ವತಿಯಿಂದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ 2023–24 ಶೈಕ್ಷಣಿಕ ವರ್ಷದಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಉನ್ನತ ಶ್ರೇಣಿಯಲ್ಲಿ (ಶೇ. 85ಕ್ಕೂ ಹೆಚ್ಚು ಅಂಕಗಳಿಸಿ) ಉತ್ತೀರ್ಣರಾದ ವಿದ್ಯಾನಗರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರ ಮಕ್ಕಳಿಗೆ ಮಾತ್ರ ಈ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ವಿದ್ಯಾನಗರ ಕ್ಷೇಮಾಭಿವೃದ್ಧಿ ಸಂಘದ ಕಾರ್ಯದರ್ಶಿ ಶ್ರೀಮತಿ ಗಾಯತ್ರಿ ಶಿವರಾಂ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಕರ್ನಾಟಕದಲ್ಲಿ ಎನ್‌ಇಪಿ ಜಾರಿಗೆ ಎಬಿವಿಪಿ ಒತ್ತಾಯ

» **ಚಿತ್ರದುರ್ಗ**

ಭಾರತ ದೇಶದಲ್ಲಿ ಭಾರತೀಯ ಶಿಕ್ಷಣ ನೀತಿಜಾರಿಗೆ ಬರಬೇಕು ಅದು ಮುಂದಿನ ಹತ್ತಾರು ವರ್ಷಗಳ ನಂತರ ದೇಶದಲ್ಲಿ ಕೌಶಲ್ಯಯುತ ಯುವಶಕ್ತಿ ಹೊರಗಡೆ ಬರಬೇಕು, ಬ್ರಿಟಿಷ್ ಶಿಕ್ಷಣ ನೀತಿಯಿಂದ ಮುಕ್ತರಾಗಿ ಭಾರತೀಯ ಶಿಕ್ಷಣವನ್ನ ಪಡೆಯಬೇಕು ಎಂಬ ಉದ್ದೇಶದಿಂದ 'ರಾಷ್ಟ್ರೀಯ ಶಿಕ್ಷಣ ನೀತಿ–2020' ಅನ್ನು ಭಾರತ ಸರ್ಕಾರ ಜಾರಿಗೆ ತಂದಿದ್ದು ಅದನ್ನು ಅನುಷ್ಠಾನಗೊಳಿಸುವಲ್ಲಿ ಕರ್ನಾಟಕ ರಾಜ್ಯ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಗಿತ್ತು, ಆದರೆ ಇಂದಿನ ರಾಜ್ಯ ಸರ್ಕಾರ ತನ್ನಚುನಾವಣಾ ಪ್ರಣಾಳಿಕೆಯಲ್ಲಿ ರಾಷ್ಟ್ರೀಯ ಶಿಕ್ಷಣ ನೀತಿಯನ್ನ ಹಿಂಪಡೆಯುತ್ತೇವೆಎಂದು ಹೇಳಿದ ಕಾರಣಕ್ಕೋಸ್ಕರ ಒಂದು ಶಿಕ್ಷಣ ನೀತಿಯನ್ನ ಬದಲಾವಣೆ ಮಾಡಲು ಹೊರಟಿರುವ ಸರ್ಕಾರದ ನಡೆಯನ್ನ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತೀವ್ರವಾಗಿ ಖಂಡಿಸುತ್ತದೆ.

ಜಿಲ್ಲಾಧಿಕಾರಿಗಳು ಮುಖಾಂತರ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರಿಗೆ ಮನವಿ ಸಲ್ಲಿಸಿದ



ಎಬಿವಿಪಿ ಪದಾಧಿಕಾರಿಗಳು ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ಒಂದೇ ರೀತಿಯ ಶಿಕ್ಷಣ ಪದ್ಧತಿ ಇರಬೇಕು ಆ ಶಿಕ್ಷಣ ಪದ್ಧತಿ, ಭಾರತೀಯ ವಿದ್ಯಾರ್ಥಿಗಳಿಗೆ ಯೋಗ ಹಾಗೂ ಇನ್ನಿತರ ಕೌಶಲ್ಯವನ್ನು ನೀಡುವ ಉದ್ದೇಶ ರಾಷ್ಟ್ರೀಯ ಶಿಕ್ಷಣ ನೀತಿಯ ಉದ್ದೇಶವಾಗಿದೆ, ಮುಂದಿನ 20–25 ವರ್ಷಗಳಲ್ಲಿ ಆಗಬಹುದಾದ ಬದಲಾವಣೆಯನ್ನು ಮುಂದಿಟ್ಟುಕೊಂಡು ಈ ನೀತಿಯನ್ನ ಹಲವಾರು ಶಿಕ್ಷಣ ತಜ್ಞರು ತಯಾರಿ ಮಾಡಿದ್ದಾರೆ, ಆದರೆರಾಜ್ಯ ಸರ್ಕಾರ ರಾಷ್ಟ್ರೀಯತೆಯನ್ನ ತುಂಡು ಮಾಡಿ ಪ್ರತ್ಯೇಕತೆಯ ಹೆಜ್ಜೆಯನ್ನ ಇಡುತ್ತಿರುವುದು ಕರ್ನಾಟಕವನ್ನು ಹಿಮ್ಮುಖ ಚಲನೆಗೆ ತೆಗೆದುಕೊಂಡು ಹೋದಂತಾಗುತ್ತದೆ, ಭಾರತೀಯತೆಯ ವಿರೋಧಿ ನೀತಿಯನ್ನು, ಭಾರತೀಯ ಜೀವನ ಪದ್ಧತಿಯನ್ನು ವಿರೋಧಿಸುವ ನೀತಿಯನ್ನು, ಇಂಗ್ಲಿಷ್ ಶಿಕ್ಷಣ ಪದ್ಧತಿಯ ನಿಲುವನ್ನ ಒಪ್ಪಿಕೊಳ್ಳುವ ನೀತಿಯನ್ನು, ಲಿಬರಲ್ ಎಜುಕೇಶನ್ ನಿಂದ ಹಿನ್ನಡೆಗೆ ತೆಗೆದುಕೊಂಡು ಹೋಗುವ ನೀತಿಯನ್ನು, ಯುಜಿಸಿ ನಿಯಮಾವಳಿಗಳನ್ನು ಕಡೆಗಣಿಸುವ ನೀತಿಯನ್ನ, ಈ ರಾಜ್ಯ ಸರ್ಕಾರ ತೆಗೆದುಕೊಳ್ಳುವುದರಿಂದ ರಾಜ್ಯದ ವಿದ್ಯಾರ್ಥಿ ಸಮುದಾಯಕ್ಕೆ ಅನ್ಯಾಯ ಮಾಡಿದಂತಾಗುತ್ತಿದೆ, ಯು.ಪಿ.ಎಸ್.ಸಿ ಹಾಗು ಇನ್ನಿತರ ಸ್ಪರ್ಧಾತ್ಮಕ ಕೋರ್ಸ್‌ಗಳಿಗೆ ಹೋಗುವ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯದ ಶಿಕ್ಷಣ ಪದ್ಧತಿಯನ್ನು ಬದಲಾವಣೆ ಮಾಡುವುದರಿಂದ ಅನ್ಯಾಯ ಮಾಡಿದಂತಾಗುತ್ತದೆ,

ಕೇವಲ ರಾಜಕೀಯ ಕಾರಣಕ್ಕೋಸ್ಕರ ಒಂದು ಉತ್ತಮ ಪ್ರಯೋಗಶೀಲ ಶಿಕ್ಷಣ ಪದ್ಧತಿಯನ್ನು ಬದಲಾವಣೆ ಮಾಡಿ ಲಕ್ಷಾಂತರ ವಿದ್ಯಾರ್ಥಿಗಳ ಜೀವನದಲ್ಲಿ ಆಟವಾಡಲು ಹೊರಟಿರುವ ಸರ್ಕಾರದ ನಡೆ ನಿಜಕ್ಕೂ ಮುಂದಿನ ದಿನಗಳಲ್ಲಿ ಬಹು ದೊಡ್ಡ ಮಾರಕವಾಗಲಿದೆ, ಎನ್‌ಇಪಿ ಜಾರಿ ಮಾಡಿದ ಕಾರಣಕ್ಕೋಸ್ಕರ ನೂರಾರು ಕೋಟಿ ರೂಪಾಯಿ ಅನುದಾನವನ್ನು ಪಿಎಂ ಉಷಾಯೋಜನೆಯಡಿಯಲ್ಲಿ ರಾಜ್ಯದ ವಿಶ್ವವಿದ್ಯಾಲಯಗಳಿಗೆ ಕೇಂದ್ರ ಸರ್ಕಾರ ನೀಡಿದೆ, ಒಂದು ವೇಳೆ ಎನ್.ಇ.ಪಿಯನ್ನು ರದ್ದು ಪಡಿಸಿದ್ದೆ ಆದಲ್ಲಿ ವಿಶ್ವವಿದ್ಯಾಲಯದ ನೀಡಿದ ಅನುದಾನವನ್ನು ಕರ್ನಾಟಕ ರಾಜ್ಯ ಸರ್ಕಾರ ಕಳೆದುಕೊಳ್ಳಬೇಕಾಗುತ್ತದೆ. ಕರ್ನಾಟಕ ರಾಜ್ಯದ ಮುಖ್ಯಮಂತ್ರಿಗಳು ಉನ್ನತ ಶಿಕ್ಷಣ ಸಚಿವರು ಈ ಎಲ್ಲ ವಿಷಯವನ್ನು ಗಮನದಲ್ಲಿಟ್ಟುಕೊಂಡು ತರಾತುರಿಯಲ್ಲಿ ಮಧ್ಯಂತರ ವರದಿಯ ಪ್ರಕಾರ ಹಿಂದಿನ ಶಿಕ್ಷಣ ಪದ್ಧತಿಯನ್ನು ಜಾರಿಗೆ ತರುತ್ತೇವೆ ಎಂಬ ಆದೇಶವನ್ನು ನೀಡಿರುವುದು ಎಬಿವಿಪಿ ಖಂಡಿಸುತ್ತದೆ ಕೂಡಲೇರಾಜ್ಯಸರ್ಕಾರಈನಿರ್ಧಾರದಿಂದ ಹಿಂದೆ ಸರಿದು ಎನ್.ಇ.ಪಿಯಲ್ಲಿ ಆಗಿರುವ ಲೋಪದೋಷಗಳನ್ನ ಸರಿಮಾಡಿ ರಾಜ್ಯದಲ್ಲಿ ಸಮರ್ಪಕವಾದ ಎನ್.ಇ.ಪಿ ಮಾಡಿ ಈ ದೇಶದ ಶಿಕ್ಷಣ ಪದ್ಧತಿಯೊಂದಿಗೆ ಕರ್ನಾಟಕ ರಾಜ್ಯವಾನ್ನಗಿ ತೆಗೆದುಕೊಂಡು ಹೋಗುವ ಮಹತ್ತರ ಜವಾಬ್ದಾರಿಯನ್ನು ಮಾಡಬೇಕೆಂದು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಆಗ್ರಹಿಸುತ್ತದೆ. ಒಂದು ವೇಳೆ ರಾಷ್ಟ್ರೀಯ ಶಿಕ್ಷಣ ನೀತಿಯನ್ನೂ ರದ್ದು ಪಡಿಸಿದ್ದೆ ಆದಲ್ಲಿ ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ಮಾಡಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನು ಈ ಮೂಲಕ ರಾಜ್ಯ ಸರ್ಕಾರಕ್ಕೆ ನೀಡುತ್ತೇವೆ.

## ಫಾಸ್ಟ್ ನ್ಯೂಸ್

### ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಫೇಲು, ವಿದ್ಯಾರ್ಥಿನಿ ಆತ್ಮಹತ್ಯೆ

» **ಹೊಸದುರ್ಗ**

ವಿದ್ಯಾರ್ಥಿಯೋರ್ವಳು ಎಸ್ಎಸ್ ಎಲ್ ಸಿ ಪರೀಕ್ಷೆಯಲ್ಲಿ ಫೇಲಾದ ಕಾರಣ ಮನನೊಂದು ನೇಣುಹಾಕಿಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ಪಟ್ಟಣದಲ್ಲಿ ಶನಿವಾರ ನಡೆದಿದೆ. ಹೊಸದುರ್ಗ ಪಟ್ಟಣದ ಕೊಬ್ಬರಿ ಪೇಟೆಯ ಧನುಶ್ರೀ( 16) ನೇಣಿಗೆ ಶರಣಾದ ವಿದ್ಯಾರ್ಥಿನಿ. ಕೊಬ್ಬರಿ ಪೇಟೆಯಲ್ಲಿ ಹೋಟೆಲ್ ಕೆಲಸ ಮಾಡಿಕೊಂಡಿದ್ದ ನಾಗರಾಜ ಎಂಬುವವರ ಮಗಳಾದ ಧನುಶ್ರೀ ಹೊಸದುರ್ಗದಲ್ಲಿ ಎಸ್ಎಸ್ಎಲ್ಸಿ ಪರೀಕ್ಷೆ ಬರೆದಿದ್ದಳು. ಪರೀಕ್ಷೆಯಲ್ಲಿ 4 ವಿಷಯಗಳು ಫೇಲಾಗಿದ್ದವು. ಇದರಿಂದ ಮನನೊಂದಿದ್ದ ಧನುಶ್ರೀ ಕಳೆದ ಮೂರು ದಿನಗಳಿಂದ ಮನೆಯಿಂದ ಹೊರಬಾರದೆ ಮನೆಯಲ್ಲಿಯೇ ಖಿನ್ನತೆಗೆ ಒಳಗಾಗಿದ್ದಳು. ಪೋಷಕರು ಇನ್ನೊಮ್ಮೆ ಪರೀಕ್ಷೆ ಬರೆಯುವಂತೆ ಧೈರ್ಯ ಹೇಳಿದ್ದರು ಖಿನ್ನತೆಯಿಂದ ಹೊರಬಾರದ ಧನುಶ್ರೀ ಶನಿವಾರ ಬೆಳಿಗ್ಗೆ ಮನೆಯಲ್ಲಿ ಯಾರು ಇಲ್ಲದ ವೇಳೆ ಅಡುಗೆ ಮನೆಯಲ್ಲಿದ್ದ ತೀರಿಗೆ ನೇಣು ಹಾಕಿಕೊಂಡಿದ್ದಾಳೆ ಎಂದು ಆಕೆ ತಂದೆ ನಾಗರಾಜ ಪೋಲೀಸರಿಗೆ ನೀಡಿರುವ ದೂರಿನಲ್ಲಿ ತಿಳಿಸಿದ್ದಾರೆ. ಈ ಬಗ್ಗೆ ಹೊಸದುರ್ಗ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠ ಶ್ರೀ ಮಹಾ ಶಿವಶರಣ ಹರಳಯ್ಯವಿದ್ಯಾ ಸಂಸ್ಥೆ ಹಾಗೂ ಶ್ರೀ ಮಹಾಶಿವಶರಣ ಹರಳಯ್ಯ ಆಂಗ್ಲ ಮಾಧ್ಯಮ ಶಾಲೆ ಇವರ ಸಂಯುಕ್ತ ಆಶ್ರಯದಲ್ಲಿ 2023/ 24 ಸಾಲಿನಲ್ಲಿ ಎಸ್ ಎಸ್ ಎಲ್ ಸಿ ಯಲ್ಲಿ ಮತ್ತು ಪಿಯುಸಿಯಲ್ಲಿ ಶೇ.80ಕ್ಕೂ ಹೆಚ್ಚು ಅಂಕಗಳಿಸಿರುವ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರವನ್ನು ಶ್ರೀ ಮಹಾಶಿವಶರಣ ಹರಳಯ್ಯ ಗುರುಪೀಠದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಶ್ರೀ ಬಸವ ಹರಳಯ್ಯ ಮಹಾ ಸ್ವಾಮೀಜಿ ತಿಳಿಸಿದ್ದಾರೆ. ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಮಕ್ಕಳು ದಿನಾಂಕ; 25/5/2024ರ ಒಳಗಾಗಿ ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠ ಐಮಂಗಳ ಇಲ್ಲಿ ಕಚೇರಿಯ ವೇಳೆಯಲ್ಲಿ ಸಂಪರ್ಕಿಸಿ ಹೆಸರು ನೊಂದಾಯಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ. ಶ್ರೀ ಬಸವ ಹರಳಯ್ಯ ಮಹಾ ಸ್ವಾಮೀಜಿಗಳು. ಶ್ರೀಮಹಾಶಿವಶರಣಹರಳಯ್ಯ ವಿದ್ಯಾಸಂಸ್ಥೆ. ಐಮಂಗಳ.ಮೋ.9449939016. ಆಫೀಸ್: 7259551325.

# ಆಪರೇಶನ್ ಕಮಲ ಬಿಜೆಪಿಯ ಹಗಲುಗನಸು: ಸಿಎಂ

» **ಬೆಂಗಳೂರು**

ಯಾವ ಕಾರಣಕ್ಕೂ ನಮ್ಮ ಸರ್ಕಾರವನ್ನು ಆಪರೇಷನ್ ಕಮಲ ಮಾಡಲು ಸಾಧ್ಯವಿಲ್ಲ. ಏಕೆಂದರೆ ಅವರು ಎನ್.ಡಿ.ಎ ಈ ಬಾರಿ ಸೋಲಲಿದೆ. ಆಪರೇಶನ್ ಕಮಲ ಬಿಜೆಪಿಯ ಹಗಲುಗನಸು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮಾಧ್ಯಮದವರೊಂದಿಗೆ ಮಾತನಾಡಿದರು.

**ನಮ್ಮ ಶಾಸಕರು ಯಾರೂ ಮಾರಾಟವಾಗಲು ತಯಾರಿಲ್ಲ:** ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಪತನವಾಗುತ್ತದೆ, ಮಹಾರಾಷ್ಟ್ರದಲ್ಲಿ ಆದಂತೆ ಆಪರೇಶನ್ ಕಮಲ ನಡೆಯಲಿದೆ ಎಂದು ಮಹಾರಾಷ್ಟ್ರ ಸಿಎಂ ಏಕನಾಥ ಶಿಂಧೆ ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿದ ಅವರು ಅವರು, ಈಗಾಗಲೇ ಕಳೆದ ಒಂದು ವರ್ಷದಿಂದ ಇಂಥ ಪ್ರಯತ್ನ ಮಾಡಿ ವಿಫಲರಾಗಿದ್ದಾರೆ ಇನ್ನೊಂದು ಬಾರಿ ಏಕೆ ಪ್ರಯತ್ನಿಸುತ್ತಾರೆ.

ನಮ್ಮ ಶಾಸಕರು ಯಾರೂ ಮಾರಾಟವಾಗಲು ತಯಾರಿಲ್ಲ. ಮಹಾರಾಷ್ಟ್ರದಲ್ಲಿ ಆದಂತೆ ಆಗಲೂ ಸಾಧ್ಯವಿಲ್ಲ ಎಂದರು. ರಾಜಕೀಯ ಧ್ರುವೀ ಕಾರಣವಾಗಬಹುದೇ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಕಾಂಗ್ರೆಸ್ ನೇತೃತ್ವದ ಇಂಡಿಯಾ ಗೆಲ್ಲಲಿದ್ದು ನಮ್ಮವರೇ ಪ್ರಧಾನಮಂತ್ರಿಯಾಗಲಿದ್ದಾರೆ ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕರ್ನಾಟಕ ವಿಧಾನಪರಿಷತ್ ದ್ವೈವಾರ್ಷಿಕ ಚುನಾವಣೆಯ ನಿಮಿತ್ತ ಬೆಂಗಳೂರು ಪದವೀಧರರ ಕ್ಷೇತ್ರದ ನಾಮಪತ್ರ ಸಲ್ಲಿಕೆ ಕಾರ್ಯಕ್ರಮ ದಲ್ಲಿ ಭಾಗವಹಿಸಿ ಅಭ್ಯರ್ಥಿಗಳೊಂದಿಗೆ ನಾಮಪತ್ರ ಸಲ್ಲಿಸಿ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದರು.

**ನಮ್ಮ ಅಭ್ಯರ್ಥಿಗಳು ಗೆಲ್ಲಲ್ಲಿದ್ದಾರೆ:** ಪದವೀಧರರ ಕ್ಷೇತ್ರದಿಂದ ರಾಮೋಜಿ ಗೌಡ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ಹಾಗೂ ಶಿಕ್ಷಕರ ಕ್ಷೇತ್ರದಿಂದ ಬಿ.ಟಿ.ಶ್ರೀನಿವಾಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ನಾನು, ಕೆ. ಹೆಚ್. ಮುನಿಯಪ್ಪ, ರಾಮಲಿಂಗಾರೆಡ್ಡಿ, ಮಧು ಬಂಗಾರಪ್ಪ, ನಜೀರ್ ಅಹ್ಮದ್ ಪಕ್ಷದ ಅಭ್ಯರ್ಥಿಗಳ ಪರವಾಗಿ ಜೊತೆಯಲ್ಲಿದ್ದೇವೆ.

ನಮ್ಮ ಮಾಹಿತಿ ಪ್ರಕಾರ ಎರಡೂ ಕ್ಷೇತ್ರಗಳಲ್ಲಿನಮ್ಮಅಭ್ಯರ್ಥಿಗಳುಗೆಲ್ಲಲ್ಲಿದ್ದಾರೆ. ಈ ಬಾರಿ ಕಾಂಗ್ರೆಸ್ ಪಕ್ಷ ಆರು ತಿಂಗಳು ಮುಂಚಿತವಾಗಿಯೇ ಅಭ್ಯರ್ಥಿಯನ್ನು ಘೋಷಣೆ ಮಾಡಿದ್ದೆವು. ಈಗಾಗಲೇ ಎಲ್ಲಾ ಮತದಾರರನ್ನು ಭೇಟಿಯಾಗಿ ಮನವಿ ಮಾಡಿಕೊಂಡಿದ್ದಾರೆ.

ಇಬ್ಬರೂ ಸಮರ್ಥ ಅಭ್ಯರ್ಥಿಗಳು. ಶ್ರೀನಿವಾಸ್ ಅವರು ಶಿಕ್ಷಕರ ಸಮಸ್ಯೆಗಳನ್ನು ಅರ್ಥಮಾಡಿಕೊಂಡು ಅವರ ಧ್ವನಿಯಾಗಿ ಕೆಲಸ ಮಾಡುವ ಸಾಮರ್ಥ್ಯ ಉಳ್ಳವರು.

ರಾಮೋಜಿ ಗೌಡ ಅವರೂ ಶಿಕ್ಷಕರಾಗಿ ಕೆಲಸ ಮಾಡಿದ್ದವರು. ಅವರಿಗೂ ಪದವೀಧರರ ಸಮಸ್ಯೆಗಳ ಬಗ್ಗೆ ಅರಿವಿದೆ. ಅವುಗಳನ್ನು ಬಗೆಹರಿಸುವ ಶಕ್ತಿ ಅವರಿಗಿದೆ. ಹಾಗಾಗಿ ಇಬ್ಬರೂ ಅಭ್ಯರ್ಥಿಗಳೂ ಗೆಲ್ಲಲಿದ್ದಾರೆ ಎಂದರು.

# ಎಸ್ಸೆಸ್ಸೆಲ್ಸಿ ಫಲಿತಾಂಶ ಕುಸಿತ: ಕ್ರಮಕ್ಕೆ ಆಗ್ರಹ

» **ಹಿರಿಯೂರು**

ತಾಲ್ಲೂಕಿನಲ್ಲಿ ಎಸ್ ಎಸ್ ಎಲ್ ಸಿ ಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳ ಫಲಿತಾಂಶ ಕಳೆದ ಬಾರಿಗಿಂತ ತುಂಬಾ ಕಡಿಮೆ ಆಗಿರುತ್ತದೆ, ಅನುದಾನಿತ ಹಾಗೂ ಖಾಸಗಿ ಶಾಲೆಯ ಫಲಿತಾಂಶಕ್ಕಿಂತ ಸರ್ಕಾರಿ ಶಾಲೆಯಲ್ಲಿ ತುಂಬಾ ಕಡಿಮೆಯಾಗಿದೆ ಕಳೆದ ಬಾರಿ ರಾಜ್ಯಕ್ಕೆ ಪ್ರಥಮ ಸ್ಥಾನಗಳಿಸಿದ ಚಿತ್ರದುರ್ಗ ಜಿಲ್ಲೆ ಒಂದೇ ವರ್ಷಕ್ಕೆ 21 ರ ಸ್ಥಾನಕ್ಕೆ ಇಳಿದಿದೆ ಇದಕ್ಕೆ ಕಾರಣ ಯಾರು, ಗ್ರಾಮೀಣ ಭಾಗದಲ್ಲಿ ಅತಿ ಹೆಚ್ಚು ರೈತರ ಮಕ್ಕಳು ಕೂಲಿ ಕಾರ್ಮಿಕರ ಮಕ್ಕಳು ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಾರೆ, ಇಂಥವರ ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಬೇಕು ಎಂದು ಸರ್ಕಾರವು ಹೆಚ್ಚು ಅನುದಾನವನ್ನು ಖರ್ಚು ಮಾಡುತ್ತದೆ. ಇಲ್ಲಿ ಕರ್ತವ್ಯ ನಿರ್ವಹಿಸುವ ಕ್ಷೇತ್ರ ಶಿಕ್ಷಣ ಅಧಿಕಾರಿಗಳು, ಆರ್‌ಪಿ ಗಳು ಮತ್ತು ಪ್ರೌಢ ಶಾಲಾ ಶಿಕ್ಷಕರು ಲಕ್ಷಾನುಗಟ್ಟಲೆ ಸಂಬಳ ತಗೆದುಕೊಂಡು ಸರಿಯಾಗಿ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಲು ವಿಫಲವಾಗಿ, ಕರ್ತವ್ಯ ನಿರ್ವಹಿಸದೆ ಲೋಪ ವ್ಯಸಗಿರುವುದರಿಂದ ಕಳಪೆ ಫಲಿತಾಂಶ ಬಂದಿರುತ್ತದೆ, ಇದರ ಬಗ್ಗೆ ಸರ್ಕಾರ ತನಿಖಾ ತಂಡವನ್ನು ರಚಿಸಿ ಸೂಕ್ತ ತನಿಖೆ, ನಡೆಸಿ ನಿಯಮಾನುಸಾರ ಕ್ರಮ ಕೈಗೊಂಡು ತಪ್ಪಿತಸ್ಥಅಧಿಕಾರಿಗಳನ್ನು ಕೂಡಲೇ ಸೇವೆಯಿಂದ ಅಮಾನತು ಗೊಳಿಸಬೇಕೆಂದು. ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಹಿರಿಯೂರು ತಾಲೂಕು ಅಧ್ಯಕ್ಷರಾದ ಕೆ ಟಿ ತಿಪ್ಪೇಸ್ವಾಮಿ, ರೈತ ಮುಖಂಡರಾದ ಸಿದ್ದರಾಮಣ್ಣ, ಅರಳಿ ಕೆರೆ ತಿಪ್ಪೇಸ್ವಾಮಿ ತಿಮ್ಮ ರೆಡ್ಡಿ ಗೋಪಾಲಪ್ಪ ರಂಗಸ್ವಾಮಿ ರಾಮಣ್ಣ ಜಗನ್ನಾಥ್ ರಾಜೇಶ್ ದಾಸಪ್ಪ ಬಾಲಕೃಷ್ಣ ಚಂದ್ರಣ್ಣ ರಾಮಕೃಷ್ಣಪ್ಪ, ಶ್ರೀನಿವಾಸ್ ಸಿದ್ದರಾಮಯ್ಯನವರಿಗೆ ಮನವಿ ಮಾಡಿರುತ್ತಾರೆ.



## ಜನ್ಮದಿನದಂದು ನನ್ನ ಭೇಟಿಗೆ ಬರಬೇಡಿ: ಡಿಕೆ ಶಿವಕುಮಾರ್ ಮನವಿ

» **ಬೆಂಗಳೂರು**

ಡಿಸಿಎಂಡಿಕೆಶಿವಕುಮಾರ್‌ಅವರು ಮೇ15ರಂದುತಮ್ಮಜನ್ಮದಿನವನ್ನು ಆಚರಿಸಿಕೊಳ್ಳುತ್ತಿದ್ದಾರೆ. ಆದರೆ ಜನ್ಮದಿನದಂದು ನಾನು ಅಲಭ್ಯ, ಇದ್ದ ಕಡೆಯಿಂದಲೇ ಹರಸಿ. ನನ್ನ ಭೇಟಿಗೆ ಬರಬೇಡಿ ಎಂದು ಡಿಕೆ ಶಿವಕುಮಾರ್ ಮನವಿ ಮಾಡಿದ್ದಾರೆ. ಈ ಕುರಿತಾಗಿ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ತಮ್ಮ ಜನ್ಮದಿನವಾದ ಮೇ 15ರಂದು ಖಾಸಗಿ ಕಾರ್ಯಕ್ರಮ ನಿಮಿತ್ತ ಉತ್ತರ ಭಾರತ ಪ್ರವಾಸ ಕೈಗೊಳ್ಳುತ್ತಿದ್ದೇನೆ. ನಾನು ಯಾರಿಗೂ ಕೂಡ ಸಿಗುವುದಿಲ್ಲ. ಪಕ್ಷದ ನಾಯಕರು, ಕಾರ್ಯಕರ್ತರು, ಅಭಿಮಾನಿಗಳು, ಬಂಧುಗಳು ನನ್ನ ಭೇಟಿಗೆ ಪ್ರಯತ್ನಿಸುವುದು ಬೇಡ. ದಯವಿಟ್ಟು ಯಾರೂ ತಪ್ಪು ತಿಳಿಯಬಾರದೆಂದು ಮನವಿ ಮಾಡಿದ್ದಾರೆ. ರಾಜ್ಯದಲ್ಲಿ ಮಳೆ-ಬೆಳೆ ಇಲ್ಲದೆ ಜನರು ಕಷ್ಟ ಪಡುತ್ತಿದ್ದಾರೆ. ಹಾಗಾಗಿ ಯಾರೂ ನನ್ನ ಜನ್ಮದಿನವನ್ನು ಆಚರಿಸಬಾರದು. ಯಾವುದೇ ಕಾರ್ಯಕ್ರಮ ಹಮ್ಮಿಕೊಳ್ಳದಂತೆ, ನನ್ನ ಜನ್ಮದಿನದಂದು ಕಟೌಟ್, ಪೋಸ್ಟರ್ ಹಾಕುವುದಾಗಲಿ, ಜಾಹೀರಾತು ನೀಡುವುದಾಗಲಿ ಮಾಡಬೇಡಿ. ನಿಮ್ಮ ಪ್ರೀತಿಯಷ್ಟೇ ನನಗೆ ಸಾಕು, ಅದುವೇ ನನಗೆ ಶ್ರೀರಕ್ಷೆ ಎಂದು ಹೇಳಿದ್ದಾರೆ.







# ಮನಸಿನೊಳಗೊಂದು ಪಯಣ

**ಬಹುಶಃ ಇದರಷ್ಟು ರೋಚಕ ಇದರಷ್ಟು ಆತ್ಮ ತೃಪ್ತಿ ಇನ್ನೊಂದಿರಲಾರದು..........**

**ಹೊರಗೆಲ್ಲೋ ಪ್ರವಾಸ,**

**ಇನ್ನೊಬ್ಬರ ವಿಮರ್ಶೆ,**

**ಬದುಕಿನ ಜಂಜಾಟ,**


**ಅಜ್ಞಾನ ಅಸಹನೆ ಅಹಂಕಾರ ಮುಂತಾದ ಕಾರಣಗಳಾಗಿ**

**ನಮ್ಮೊಳಗಿನ ಬೇಡಿಕೆಗಳ ಪೂರೈಕೆಯಲ್ಲಿ ನಮ್ಮ ಒಳಗಿನ ಪ್ರಯಾಣಕ್ಕೆ ಸಮಯವೇ ಇರುವುದಿಲ್ಲ.....**

**ಕೆಲವೊಮ್ಮೆ ಸಮಯವಿದ್ದರು ಅದರ ಆಗಾಧತೆಗೆ ಅಂಜಿ ಅದರೊಳಗೆ ಪ್ರವೇಶಿಸಲು ಭಯ ಮತ್ತು ನಿರಾಸಕ್ತಿ ಮೂಡುತ್ತದೆ.....**

**ನಮ್ಮೊಳಗೆ ನಾವು ಪ್ರವೇಶಿಸದ ಬದುಕು ಒಂದು ರೀತಿಯಲ್ಲಿ ಅಪೂರ್ಣ.......**

**ನಮ್ಮೊಳಗೆ ನಾವು ಪ್ರವೇಶಿಸುವುದು ಹೇಗೆ ಮತ್ತು ಅಲ್ಲಿನ ಪಯಣ ಹೇಗೆ.......**



## ಸೃಷ್ಟಿ......

75 ಭಾಗ ನೀರು – 25 ಭಾಗ ಭೂಮಿ.......

ಆ ಭೂಮಿಯ ಮೇಲೆ ಗಾಳಿ ನೀರು ಬೆಳಕು ಬೆಟ್ಟ ಗುಡ್ಡ ಕಾಡು ನದಿ ಸರೋವರ ವಿಚಿತ್ರ ಪ್ರಾಣಿಗಳು.....

ಅದರಲ್ಲೊಂದು ವೈಶಿಷ್ಟ್ಯದ ಪ್ರಾಣಿ ಎಂಬ ಮನುಷ್ಯ......

ಆ ಮನುಷ್ಯ ಪ್ರಾಣಿಯ ಬಣ್ಣದಲ್ಲಿ ಕಪ್ಪು ಬಿಳುಪು ಕಂದು ಎಂಬಿತ್ಯಾದಿ ಒಂದಷ್ಟು ವ್ಯತ್ಯಾಸಗಳು......

ಆ ವ್ಯತ್ಯಾಸಗಳಲ್ಲಿ ಈ ಪ್ರಾಣಿಯ ಆಚರಣೆಯಲ್ಲಿ ಹಿಂದೂ ಮುಸ್ಲಿಂ ಕ್ರಿಶ್ಚಿಯನ್ ಬೌದ್ದ ಇತ್ಯಾದಿ ಇತ್ಯಾದಿ ಭಿನ್ನತೆಗಳು.....

ಆ ಭಿನ್ನತೆಗಳಲ್ಲಿ ಅಮೇರಿಕ ಚೀನಾ ಆಫ್ರಿಕಾ ರಷ್ಯಾ ಆಸ್ಟ್ರೇಲಿಯಾ ಪಾಕಿಸ್ತಾನ ಭಾರತ ಶ್ರೀಲಂಕಾ ಮುಂತಾದ ಪ್ರದೇಶಗಳ ವಿಂಗಡನೆ.....

ಆ ವಿಂಗಡನೆಗಳಲ್ಲಿ ಕನ್ನಡ ತಮಿಳು ಹಿಂದಿ ಇಂಗ್ಲಿಷ್ ಫ್ರೆಂಚ್ ಸಂಸ್ಕೃತ ಮುಂತಾದ ಅನೇಕ ಭಾಷಾ ಪ್ರಬೇಧಗಳು....

ಆ ಪ್ರಬೇಧಗಳ ಮನುಷ್ಯ ಪ್ರಾಣಿಗಳಲ್ಲಿ ಅಸ್ಪೃಶ್ಯ ಬ್ರಾಹ್ಮಣ ಗೌಡ ಲಿಂಗಾಯತ ಪಟೇಲ ಎಂಬಿತ್ಯಾದಿ ಭೇದಗಳು......

ಆ ಭೇದಗಳಲ್ಲಿ ಬಡವ ಶ್ರೀಮಂತ ಮೇಲು ಕೀಳು ವಿದ್ಯಾವಂತ ಅನಕ್ಷರಸ್ಥ ಎಂಬ ತಾರತಮ್ಯಗಳು.....

ಆ ತಾರತಮ್ಯಗಳಲ್ಲಿ ಜವಾನ ಅಧಿಕಾರಿ ಮಂತ್ರಿ ಒಡೆಯ ಆಳು ಕೂಲಿ ಎಂಬ ವಿಭಾಗಗಳು......

ಆ ವಿಭಾಗಗಳಲ್ಲಿ ಅಪ್ಪ ಅಮ್ಮ ಗಂಡ ಹೆಂಡತಿ ಮಕ್ಕಳು ಎಂಬ ಅನೇಕ ಸಂಬಂಧಗಳು......

ಆ ಸಂಬಂಧಗಳಲ್ಲಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ರಾಜಕೀಯ ಮುಂತಾದ ಅಸಮಾನತೆಗಳು....

ಆ ಅಸಮಾನತೆಗಳಲ್ಲಿ ನಮ್ಮ ಸ್ಥಾನಮಾನವನ್ನು ಸ್ಪಷ್ಟವಾಗಿ ಅರ್ಥಮಾಡಿಕೊಳ್ಳಬೇಕು.....

ಅಂದರೆ ಸೃಷ್ಟಿಯ ಮೂಲದಿಂದ ನಮ್ಮ ಯೋಚನಾ ಶಕ್ತಿ ರೂಪಗೊಳ್ಳಬೇಕು ಮತ್ತು ಪ್ರಾರಂಭವಾಗಬೇಕು......

## ಮುಂದೆ....

ಇಷ್ಟು ಅರ್ಥಮಾಡಿಕೊಳ್ಳುವ ವೇಳೆಗಾಗಲೇ ಸೃಷ್ಟಿಯಲ್ಲಿ ನಮ್ಮ ಅಸ್ತಿತ್ವದ ಒಂದು ಅಂದಾಜು, ಈ ಸಮಾಜ ಅಥವಾ ದೇಶದಲ್ಲಿ ಹಾಗು ಕೌಟುಂಬಿಕ ವ್ಯವಸ್ಥೆಯಲ್ಲಿ ನಮ್ಮ ಸ್ಥಾನಮಾನದ ಒಂದು ಚಿತ್ರಣ ನಮ್ಮ ಮನಸ್ಸಿನಲ್ಲಿ ಮೂಡುತ್ತದೆ.

ಆ ಮನಸ್ಸಿನ ಪ್ರವೇಶ ದ್ವಾರದ ಮೂಲಕ ಆತ್ಮದೊಳಗೆ ಹೆಜ್ಜೆ ಇಡಲು ಪ್ರಾರಂಭಿಸಿ....

ಇಲ್ಲಿಯವರೆಗಿನ ನಿಮ್ಮ ಅನುಭವ ಅಧ್ಯಯನ ಚಿಂತನೆ ಅರಿವು ಎಲ್ಲವನ್ನೂ ಒಟ್ಟುಗೂಡಿಸಿ ಒಂದೊಂದು ಹೆಜ್ಜೆ ಇಡುತ್ತಾ ಮುಕ್ತವಾಗಿ ಸಂಚರಿಸಿ......

ಸೊನ್ನೆಯಿಂದ ನೂರರವರೆಗಿನ ಸಮಯ ಅಥವಾ ಕಾಲವನ್ನು ಮನುಷ್ಯ ಪ್ರಾಣಿಯ ಜೀವನ ಅಥವಾ ಬದುಕು ಎಂದು ಪರಿಗಣಿಸಲಾಗುತ್ತದೆ.........

ಈ ಬದುಕಿನ ಪಯಣದ ಹಾದಿ ಅರ್ಥ ಉದ್ದೇಶ ಗುರಿ ಸಾರ್ಥಕತೆ ಸೃಷ್ಟಿಯ ಸಹಜತೆ ಎಲ್ಲವನ್ನೂ ನಮ್ಮ ತಿಳಿವಳಿಕೆಯ ಮಿತಿಯಲ್ಲಿ ನಾವು ಗ್ರಹಿಸಿದಂತೆ ನಮ್ಮೊಳಗೆ ಒಂದು ಆತ್ಮಾವಲೋಕನ ಮಾಡಿಕೊಳ್ಳಬೇಕು. ನಮ್ಮ ಜವಾಬ್ದಾರಿ ಕರ್ತವ್ಯ ಯಾವುದು ಎಂದು ಸ್ಪಷ್ಟಪಡಿಸಿಕೊಳ್ಳಬೇಕು. ನಮ್ಮ ದೇಹ ಮತ್ತು ಮನಸ್ಸಿನ ಬೇಡಿಕೆ ಮತ್ತು ಪೂರೈಕೆಯ ಮಾರ್ಗಗಳನ್ನು ಗುರುತಿಸಿಕೊಳ್ಳಬೇಕು.

ವೈಯಕ್ತಿಕತೆ, ಕೌಟುಂಬಿಕತೆ, ಸಾಮಾಜಿಕತೆ, ನೈತಿಕತೆ, ಮಾನವೀಯತೆ ಎಲ್ಲವನ್ನೂ ಸಮಗ್ರವಾಗಿ ಪರಿಶೀಲಿಸಿ ನಮ್ಮ ನಡೆಯನ್ನು ರೂಪಿಸಿಕೊಳ್ಳಲು ಪ್ರಯತ್ನಿಸಬೇಕು......

ಅತಿಮುಖ್ಯವಾಗಿ ಬದುಕಿನ ಏರಿಳಿತಗಳಲ್ಲಿ ನಮ್ಮ ಪ್ರತಿಕ್ರಿಯೆ ಮತ್ತು ನಿಯಂತ್ರಣ ಮನಸ್ಸಿನೊಳಗಿನ ಪಯಣದಲ್ಲಿ ಮಹತ್ವ ಪಡೆಯಬೇಕಾದ ವಿಷಯ.....

ಏಕೆಂದರೆ, ಈ ಪಯಣದಲ್ಲಿ ನಮ್ಮ ಹುಡುಕಾಟ ನಮ್ಮೊಳಗಿನ ಅಂತಃ ಶಕ್ತಿಯನ್ನು ಉದ್ದೀಪನಗೊಳಿಸುವಂತಿರಬೇಕು. ಭವಿಷ್ಯದ ಕನಸುಗಳಿಗೆ ನೀರೆರೆಯುವಂತಿರಬೇಕು. ನಮ್ಮಲ್ಲಿರುವ ಕತ್ತಲನ್ನು ಕಳೆದು ಬೆಳಕು ಮೂಡುವಂತಿರಬೇಕು. ನಮ್ಮ ನೆಮ್ಮದಿಯ ಮಟ್ಟ ಹೆಚ್ಚುವಂತಿರಬೇಕು. ಒಟ್ಟಿನಲ್ಲಿ ಈ ಪಯಣ ನಮಲ್ಲಿ ಸ್ಫೂರ್ತಿ ತುಂಬಿ ನಮ್ಮನ್ನು ಪುನಶ್ಚೇತನಗೊಳಿಸುವಂತಿರಬೇಕು. ನಮ್ಮಲ್ಲಿನ ಸಂಕುಚಿತತೆ ಕಡಿಮೆಯಾಗಿ ವಿಶಾಲ ಮನೋಭಾವ ಬೆಳೆಸುವಂತಿರಬೇಕು.......

ಏಕೆಂದರೆ, ಮನಸ್ಸೆಂಬುದು ರೀ ಚಾರ್ಜಬಲ್ ಬ್ಯಾಟರಿ ಇದ್ದಂತೆ. ಅದನ್ನು ಆಗಾಗ ರೀ ಚಾರ್ಜ್ ಮಾಡುತ್ತಲೇ ಇರಬೇಕು ಮತ್ತು ಅದನ್ನು ಹೊರಗಿನ ಮೂಲಗಳ ಜೊತೆಗೆ ಒಳಗಿನ ಸಂಪನ್ಮೂಲಗಳನ್ನು ಹೆಚ್ಚಾಗಿ ಬಳಸಿ ರೀ ಚಾರ್ಜ್ ಮಾಡಿದರೆ ಅದು ದೀರ್ಘ ಬಾಳಿಕೆ ಮತ್ತು ಹೆಚ್ಚು ದಕ್ಷತೆಯಿಂದ ಕ್ರಿಯಾತ್ಮಕವಾಗಿ ಕೆಲಸ ಮಾಡುತ್ತದೆ.....

ಅದಕ್ಕಾಗಿ ಆಗಾಗ ಅನಂತತೆಯೆಂಬ ಮನಸ್ಸಿನೊಳಗೆ ಸದಾ ಪಯಣಿಸುತ್ತಲೇ ಇರಬೇಕು. ಯಾರೋ ಯೋಗಿಗಳು, ಆಧ್ಯಾತ್ಮಿಕ ಗುರುಗಳು, ಸಾಧಕರು, ಋಷಿ ಮುನಿಗಳು ಮುಂತಾದವರು ಮಾತ್ರ ಮಾಡುವ ಮತ್ತು ಮಾಡಲು ಸಾಧ್ಯವಾಗುವ ವಿಷಯವಿದು. ಸಾಮಾನ್ಯ ಜನರಿಗೆ ಅಸಾಧ್ಯ ಎಂಬ ತಪ್ಪು ಕಲ್ಪನೆ ಮೂಡಿಸಲಾಗಿದೆ.....


ಎಲ್ಲಾ ಆರೋಗ್ಯವಂತ ಸಹಜ ಸಾಮಾನ್ಯ ವ್ಯಕ್ತಿಗಳು ಸಹ ತಮ್ಮ ಮನಸ್ಸಿನೊಳಗೆ ತಮಗೆ ಸಾಧ್ಯವಿರುವ ತಮ್ಮ ಮಿತಿಯಲ್ಲಿ ಸದಾ ಪ್ರಯಾಣಿಸಬಹುದು. ನೀವು ಸಹ ಸ್ವಚ್ಛಂದವಾಗಿ, ಮುಕ್ತವಾಗಿ ಪ್ರಯತ್ನಿಸಿ ನೋಡಿ. ಪರಿಣಾಮ – ಫಲಿತಾಂಶ ನಿಮ್ಮ ವಿವೇಚನೆಗೆ ಬಿಡುತ್ತಾ....

ಇದೊಂದು ದೀರ್ಘ ಮತ್ತು ನಿರಂತರ ಅಭ್ಯಾಸ. ಬದುಕಿನ ಕೊನೆಯ ಪುಟದವರೆಗೂ ನಡೆಯುತ್ತಲೇ ಇರಬೇಕು. ಆ ವ್ಯಕ್ತಿಯ ಜೀವನಮಟ್ಟ ಖಂಡಿತ ಸುಧಾರಣೆಯಾಗಿ ಕಿಣಚಿಟಣಥಿ ಠಜಿ ಐಜಿಜ ಉನ್ನತ ದರ್ಜೆಗೇರುವ ಎಲ್ಲಾ ಸಾಧ್ಯತೆ ಇದೆ ಎಂಬ ಭರವಸೆ ಮೂಡಿಸುತ್ತಾ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಸ್ಸುಗಳ ಅಂತರಂಗದ ಚಳವಳಿ,



■ ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T